**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಸರ್ಕಾರಿ ಪದವಿ ಕಾಲೇಜುಗಳಲ್ಲಿ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರಿಗೆ ಉಂಟಾಗಿರುವ ತೊಂದರೆಗಳು ಮತ್ತು ಹಲವಾರು ವರ್ಷಗಳಿಂದ ನಿರಂತರವಾಗಿ ಕಾರ್ಯನಿರ್ವಹಿಸಿದ ಇವರಿಗೆ ರಜೆ ಮತ್ತು ಇತರೆ ಸವಲತ್ತುಗಳನ್ನು ಒದಗಿಸದೆ ಇರುವುದು ಹಾಗೂ ಸೇವಾ ಭದ್ರತೆ ನೀಡದೆ ಇದ್ದು, ಯು.ಜಿ.ಸಿ. ನಿಯಮಾವಳಿಯಂತೆ ವೇತನ ನೀಡದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ**

- ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.
- ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿರುತ್ತದೆ.
- 2020-21 ನೇ ಸಾಲಿನ ವರೆಗೂ ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿರುತ್ತದೆ.
- ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ:10.12.2021 ರಿಂದ ಮುಷ್ಕರ ನಡೆಸಿರುತ್ತಾರೆ.
- ಈ ಹಿನ್ನಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪರಿಶೀಲಿಸಿ, ವಿಸ್ತೃತ ವರದಿಯನ್ನು ಸಲ್ಲಿಸಿರುತ್ತಾರೆ.
- ಸದರಿ ವರದಿಯನ್ನು ಪರಿಶೀಲಿಸಿ ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14.01.2022 & ತಿದ್ದುಪಡಿ ದಿನಾಂಕ:24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ) ನೀಡಲಾಗುತ್ತಿದೆ.

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ) ನೀಡಲಾಗುತ್ತಿದೆ.

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ) ನೀಡಲಾಗುತ್ತಿದೆ.

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ) ನೀಡಲಾಗುತ್ತಿದೆ.

* ಅದರಂತೆ, ದಿನಾಂಕ:28.01.2022 ರಿಂದ ಪ್ರಸಕ್ತ 2022-23 ನೇ ಶೈಕ್ಷಣಿಕ ಸಾಲಿನಲ್ಲಿಯೂ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲು ಕ್ರಮ ವಹಿಸಲಾಗಿದ್ದು, ಅಭ್ಯರ್ಥಿಗಳು ತಮಗೆ ಬೇಕಾಗಿರುವ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಳ್ಳಲು ಮುಕ್ತ ಅವಕಾಶ ನೀಡಲಾಗಿರುತ್ತದೆ. ಅದರನ್ವಯ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿ, ಕರ್ತವ್ಯ ನಿರ್ವಹಿಸುತ್ತಿದ್ದಾರೆ.
* ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಇಡಿ 160 ಡಿಸಿಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು